## ಬೆಂಗಳೂರು ಗ್ರಾಮಾಂತರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಮಾಹಿತಿ

# ಆನೇಕಲ್‌ನಲ್ಲಿ ಇಂದು ಅಪರಾಧ ಮಾಸಾಚರಣೆ

■ ವಿಜಯವಾಣಿ ಸುದ್ದಿಜಾಲ ಆನೇಕಲ್

ಮಾದಕ ವಸ್ತುಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಜ.7ರಂದು ಪಟ್ಟಣದಲ್ಲಿ ಅಪರಾಧ ಮಾಸಾಚರಣೆ ಹಮ್ಮಿಕೊಳ್ಳಲಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ್ ಬಾಲದಂಡಿ ತಿಳಿಸಿದರು.

**» ಜ.7ರಂದು ಬೆಳಗ್ಗೆ 7 ಗಂಟೆಗೆ 5 ಕಿಲೋಮೀಟರ್ ಹಾಗೂ 3 ಕಿಲೋಮೀಟರ್ ವಾಕಥಾನ್**

ಮಾದಕ ವಸ್ತು ಬಳಕೆ ವಿರೋಧಿಸಿ ಬೆಂಗಳೂರು ನಗರ ಜಿಲ್ಲಾ ಪೊಲೀಸ್ ಇಲಾಖೆಯಿಂದ ಜ.7ರಂದು ಬೆಳಗ್ಗೆ 7 ಗಂಟೆಗೆ 5 ಕಿಲೋಮೀಟರ್ ಹಾಗೂ 3 ಕಿಲೋಮೀಟರ್ ವಾಕಥಾನ್ ಆಯೋಜಿಸಲಾಗಿದೆ. ಅಲಯನ್ಸ್ ಕಾಲೇಜಿನಿಂದ ಬೆಳಗ್ಗೆ 7 ಗಂಟೆಗೆ ವಾಕಥಾನ್ ಆರಂಭವಾಗಲಿದೆ. ಭಾಗವಹಿಸುವವರು ಅಂದು ಬೆಳಗ್ಗೆ 6.45ರೊಳಗೆ ನೋಂದಣಿ ಮಾಡಿಕೊಳ್ಳಬೇಕು ಎಂದು ಪಟ್ಟಣದ ಅಲಯನ್ಸ್ ಕಾಲೇಜಿನಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಬೆಗ್ಗೆ 9ಗಂಟೆಗೆ ಕಾಲೇಜಿನಲ್ಲಿ ವೇದಿಕೆ ಕಾರ್ಯಕ್ರಮ ಆಯೋಜಿಸಿದ್ದು, ಮಾದಕ ವಸ್ತುಗಳ ಬಳಕೆಯಿಂದ ವಿದ್ಯಾರ್ಥಿಗಳಲ್ಲಿ ಆಗಲಿರುವ ತೊಂದರೆ ಕುರಿತು ಜಾಗೃತಿ ಮೂಡಿಸಲಾಗುವುದು ಎಂದು ಹೇಳಿದರು.

ವಾಕಥಾನ್ ಕೇಂದ್ರ ವಲಯ ಐಜಿಪಿ ರವಿಕಾಂತೇಗೌಡ ಹಾಗೂ ಸಿನಿಮಾ ತಾರೆಯರು ಹಾಗೂ ಕ್ರೀಡಾಪಟುಗಳು ಚಾಲನೆ ನೀಡಿ, ಓಟದಲ್ಲಿ ಭಾಗವಹಿಸಲಿದ್ದಾರೆ ಎಂದರು.

ಇತ್ತೀಚಿಗೆ ಹೆಚ್ಚಿನ ಪ್ರಮಾಣದಲ್ಲಿ ಕಾಲೇಜು ವಿದ್ಯಾರ್ಥಿಗಳು ಮಾದಕ ವಸ್ತುಗಳಿಗೆ ಬಲಿಯಾಗುತ್ತಿದ್ದಾರೆ. ಪ್ರಾರಂಭಿಕ ಹಂತದಲ್ಲೇ ಇದಕ್ಕೆ ಕಡಿವಾಣ ಹಾಕಬೇಕು ಎನ್ನುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಶ್ರಮಿಸುತ್ತಿದೆ. 2023ರಲ್ಲಿ ಬೆಂಗಳೂರು ಗ್ರಾಮಾಂತರ ಪೊಲೀಸ್ ಇಲಾಖೆ ವ್ಯಾಪ್ತಿಯಲ್ಲಿ ಮಾದಕ ವಸ್ತು ಸಂಬಂಧಿಸಿದ 250 ಪ್ರಕರಣಗಳು ದಾಖಲಾಗಿದ್ದು, 150 ಜನರ ಮೇಲೆ ಪ್ರಕರಣ ದಾಖಲಾಗಿದೆ, ಬಂಧಿತರಿಂದ 750 ಕೆಜಿ ಗಾಂಜಾ ವಶಕ್ಕೆ ಪಡೆಯಲಾಗಿದೆ ಎಂದು ಹೇಳಿದರು.

ಅಲಯನ್ಸ್ ಕಾಲೇಜಿನ ಪ್ರಾಂಶುಪಾಲ ಅಭಯ್ ಛಬ್ಬಿ ಮಾತನಾಡಿ, ವಾಕಥಾನ್‌ನಲ್ಲಿ ಕಾಲೇಜಿನ ವಿದ್ಯಾರ್ಥಿಗಳ ಜತೆಗೆ ಸುತ್ತಮುತ್ತಲ ಶಾಲಾ-ಕಾಲೇಜುಗಳು, ಸಂಘ ಸಂಸ್ಥೆಗಳು ಕೈಜೋಡಿಸಿವೆ ಎಂದು ಹೇಳಿದರು.

ಪೊಲೀಸ್ ಇನ್‌ಸ್ಪೆಕ್ಟರ್ ಚಂದ್ರಪ್ಪ, ಅಯ್ಯಣ್ಣ ರೆಡ್ಡಿ, ನವೀನ್, ರಾಘವ್ ಗೌಡ, ಸಂಜೀವ್ ಮಹಾಜನ್ ಇತರರು ಇದ್ದರು.



ಆನೇಕಲ್‌ನ ಅಲಯನ್ಸ್ ಕಾಲೇಜಿನಲ್ಲಿ ಶುಕ್ರವಾರ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ಗ್ರಾಮಾಂತರ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ್ ಬಾಲದಂಡಿ ಮಾತನಾಡಿದರು. ಅಡಿಷನಲ್ ಎಸ್ಪಿ ಎಂ.ಎಲ್ ಪುರುಷೋತ್ತಮ್, ಡಿವೈಎಸ್ಪಿ ಮೋಹನ್, ಅಲಯನ್ಸ್ ಕಾಲೇಜಿನ ಆಡಳಿತ ಮಂಡಳಿ ಸದಸ್ಯೆ ಸುರೇಖಾ ಶೆಟ್ಟಿ, ಪ್ರಾಂಶುಪಾಲ ಅಭಯ್ ಛಬ್ಬಿ ಮತ್ತಿತರರು ಹಾಜರಿದ್ದರು.